# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ/02/ಸಭೆ- 2/2020-21 ದಿನಾಂಕ : 14-10-2020

## -: ಸಭಾ ಸೂಚನಾ ಪತ್ರ :-

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ತಿದ್ದುಪಡಿ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020-21 ದಿನಾಂಕ : 02-10-2020.

-****-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ-29 ಕಾಚರಕನಹಳ್ಳಿಯ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ : 17-10-2020 ಶನಿವಾರ ರಂದು ಬೆಳಿಗ್ಗೆ 10-30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಲು ಕೋರಿದೆ.

## -: ಸಭಾ ಅಜೆಂಡಾ :-

| | |
|---|---|
| 1 | ವಾರ್ಡಿನ ವಿವಿಧ ಬಡಾವಣೆಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. |
| 2 | ವಾರ್ಡಿನ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ. |
| 3 | ಕಂದಾಯ ಇಲಾಖೆಗೆ ಸಂಬಂಧಿಸಿದ ಬಗ್ಗೆ. |
| 4 | ನೀರು ಸರಬರಾಜು ಮತ್ತು ಒಳಚರಂಡಿಗೆ (BWSSB) ಸಂಬಂಧಿಸಿದ ವಿಷಯಗಳ ಬಗ್ಗೆ. |
| 5 | ವಿದ್ಯುತ್ ಸರಬರಾಜು (Bescom) ಸಂಬಂಧಿಸಿದ ವಿಷಯಗಳ ಬಗ್ಗೆ. |
| 6 | ಉದ್ಯಾನವನ ಮತ್ತು ಬೀದಿ ದೀಪ ನಿರ್ವಹಣೆಯ ಕುರಿತು |
| 7 | Traffic isues and Law and Order issues |
| 8 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಚರ್ಚಿಸುವ ಬಗ್ಗೆ. |
| 9 | ಮಾನ್ಯ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳು. |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

ಸಹಿ/-
ಕಾರ್ಯದರ್ಶಿ ವಾರ್ಡ್ ಸಮಿತಿ-29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-29

**ಪ್ರತಿಯನ್ನು:-**

1. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.

2. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
3. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
4. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.
5. ಕಲ್ಯಾಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
6. ಅರಣ್ಯ ಸಂರಕ್ಷಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (BWSSB) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (Bescom) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (SWM) (ಸರ್ವಜ್ಞನಗರ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
10. ಸಹಾಯಕ ಕಂದಾಯ ಅಧಿಕಾರಿಗಳು, ಹೆಚ್.ಬಿ.ಆರ್ ಲೇಔಟ್ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂದಿಯನ್ನು ನಿಯೋಜಿಸಲು ಕೋರಿದೆ.
11. ಪೊಲೀಸ್ ಇನ್ಸ್‌ಫೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
12. ಪೊಲೀಸ್ ಇನ್ಸ್‌ಫೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ ರವರು ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳು ಮತ್ತು ಮೂಲಭೂತ ಸೌಕರ್ಯಗಳು ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ (SWD) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೀದಿ ದೀಪಗಳ ವಿಭಾಗ-ಪೂರ್ವ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
16. ಆರೋಗ್ಯ ವೈದ್ಯಾಧಿಕಾರಿಗಳು, ಕಾಚರಕನಹಳ್ಳಿ ರವರು ಖುದ್ದಾಗಿ ಹಾಜರಾಗಲು ಕೋರಿದೆ.
17. ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ರವಾನಿಸಿದೆ.

14/10/2020

**ಕಾರ್ಯದರ್ಶಿ ವಾರ್ಡ್ ಸಮಿತಿ-29**
**ಹಾಗೂ ಸಹಾಯಕ ಅಭಿಯಂತರರು,**
**ವಾರ್ಡ್-29**

Banaswadi Police Station
Bangalore-560 043

15/10/2020

Banaswadi Traffic Police Station
Bengaluru
No.
Dt: 15/10/20

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 17-10-2020 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು
3. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು
4. ಶ್ರೀ.ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು
5. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್
6. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್)
7. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ.ರಾಜಶೇಖರ್, ಕಂದಾಯ ಪರಿವೀಕ್ಷಕರು.
2. ಶ್ರೀ ಶ್ರೀನಿವಾಸ್, ಕರ ವಸೂಲಿಗಾರರು, ಕಂದಾಯ ವಿಭಾಗ
3. ಶ್ರೀ.ಅಶೋಕ್, ಸಹಾಯಕ ಅಭಿಯಂತರರು, ಬೆಸ್ಕಾಂ
4. ಶ್ರೀ ವೆಂಕಟೇಶ್ ಆಚಾರ್, ಸಹಾಯಕ ಅಭಿಯಂತರರು, ಬೆಸ್ಕಾಂ
5. ಶ್ರೀ.ದವಲ್, ಸಹಾಯಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ)
6. ಶ್ರೀ.ನಾರಾಯಣಸ್ವಾಮಿ, ಸಂಚಾರಿ ಪೊಲೀಸ್ ಇನ್ಸ್‌ಪೆಕ್ಟರ್, ಬಾಣಸವಾಡಿ ಪೊಲೀಸ್ ಠಾಣೆ.
7. ಶ್ರೀ ವೆಂಕಟಸ್ವಾಮಿ, ತೋಟಗಾರಿಕಾ ನಿರೀಕ್ಷಕರು
8. ಶ್ರೀಮತಿ ಸುಮ (ವೈದ್ಯಾಧಿಕಾರಿಗಳ ಕಛೇರಿ ಸಿಬ್ಬಂದಿ)
9. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ
10. ಶ್ರೀ ಶಿವಕುಮಾರ್, ಕೊವಿಡ್ ಉಸ್ತುವಾರಿ ತಹಶೀಲ್ದಾರ್,

ಈ ಸಭೆಗೆ ಹಾಜರಾಗಿದ್ದ ಮೇಲ್ಕಂಡ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದ ಕಮ್ಮನಹಳ್ಳಿ ರಾಮಯ್ಯ ಬಡಾವಣೆ, ನೆಹರು ರಸ್ತೆ ಮತ್ತು ಅಜ್ಮಲ್ಲಪ್ಪ ಬಡಾವಣೆಗಳಲ್ಲಿ ವಿದ್ಯುತ್ ದೀಪಗಳು ಉರಿಯುತ್ತಿರುವುದಿಲ್ಲವೆಂದು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ಕೂಡಲೇ ವಿದ್ಯುತ್ ದೀಪಗಳನ್ನು ದುರಸ್ತಿಪಡಿಸಲು ಹಾಗೂ ಮುಂದಿನ ಸಭೆಗೆ ವಿದ್ಯುತ್ ದೀಪಗಳ ವಿಭಾಗದ ಅಭಿಯಂತರರು ರವರು ಸಭೆಗೆ ಹಾಜರಾಗಲು ಸಭೆಯ ಪರವಾಗಿ ಪತ್ರವನ್ನು ಬರೆಯಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

2) **ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ದಿನನಿತ್ಯ ಬೆಸ್ಕಾಂ ಇಲಾಖೆಯವರು ಮರಗಳನ್ನು ಟ್ರಿಮ್ ಮಾಡಿ, ಎಲ್ಲಂದರಲ್ಲಿ ಬಿಸಾಡಿ ಹೋಗುತ್ತಾರೆ. ಇದರಿಂದ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಿರುತ್ತದೆ ಎಂದು

ಸಭೆಯಲ್ಲಿ ಪ್ರಸ್ತಾಪಿಸಿದಾಗ ಈ ಬಗ್ಗೆ ಚರ್ಚಿಸಲಾಗಿ, ವಾರ್ಡ್ ಪ್ರದೇಶದಲ್ಲಿ ಎಲ್ಲೇ ಮರಗಳನ್ನು ಟ್ರಿಮ್ ಮಾಡಿದರೂ ಕೂಡಲೇ ತೆರವುಗೊಳಿಸಿ, ಸಾಗಾಣಿಕೆ ಮಾಡಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

3) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,</u> ವಾರ್ಡ್ ಪ್ರದೇಶದಲ್ಲಿ ಸ್ವಚ್ಛತೆ ಸಮರ್ಪಕವಾಗಿ ನಡೆಯುತ್ತಿರುತ್ತದೆ, ಇದಕ್ಕೆ ಯಾವುದೇ ಆಕ್ಷೇಪಣೆ ಇರುವುದಿಲ್ಲ. ಆದರೆ ಸಾಗಾಣಿಕೆಯು ತಡವಾಗಿ ಆಗುತ್ತಿರುವುದಾಗಿ ಸಭೆಯ ಗಮನಕ್ಕೆ ತಂದಾಗ, ಸಭೆಯಲ್ಲಿ ಚರ್ಚಿಸಲಾಗಿ, ಇನ್ನು ಮುಂದೆ ಸ್ವಚ್ಛತೆ ಆದ ನಂತರ ವಾರ್ಡಿನ ಮನೆ ಮನೆಗಳಿಂದ ಸಂಗ್ರಹಣೆ ಮಾಡಲಾದ ಘನತ್ಯಾಜ್ಯವನ್ನು ಕೂಡಲೇ ವಿಲೇವಾರಿ ಮಾಡಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರಿಗೆ ಸಭೆಯು ಸೂಚಿಸಿತು.

4) <u>ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಮಾತನಾಡಿ,</u> ವಾರ್ಡ್ ಪ್ರದೇಶದಲ್ಲಿ ಪ್ರಸ್ತುತ ಕಂದಾಯ ವಸೂಲಾತಿ ಬಗ್ಗೆ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರು ಮಾತನಾಡಿ, ಈ ವಾರ್ಡ್ ಪ್ರದೇಶದಲ್ಲಿ ಒಟ್ಟು ರೂ.11.00 ಕೋಟಿ ತೆರಿಗೆ ಸಂಗ್ರಹಿಸಬೇಕಾಗಿರುತ್ತದೆ. ಈ ಪೈಕಿ ರೂ.5.00 ಕೋಟಿ ಗಳನ್ನು ಸಂಗ್ರಹಿಸಲಾಗಿರುತ್ತದೆ. ಬಾಕಿ ಇರುವಂತಹ ಆಸ್ತಿಗಳ ಮಾಲೀಕರಿಗೆ ಕೂಡಲೇ ಪಾವತಿಸುವಂತೆ ನೋಟೀಸ್‌ಗಳನ್ನು ಸಹ ನೀಡಲಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಈ ಬಗ್ಗೆ ಚರ್ಚಿಸಿ ತೆರಿಗೆ ವಸೂಲಾತಿಯನ್ನು ತೀವ್ರ ಗತಿಯಲ್ಲಿ ವಸೂಲಾತಿಯನ್ನು ಕೈಗೊಳ್ಳಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

5) <u>ಮಾನ್ಯ ಅದ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ,</u> ವಾರ್ಡ್ ಪ್ರದೇಶದಲ್ಲಿನ ಸಿ.ಎಂ.ಆರ್ ರಸ್ತೆಯಲ್ಲಿ ನಡೆಯುತ್ತಿರುವ ವೈಟ್ ಟ್ಯಾಪಿಂಗ್ ರಸ್ತೆ ಕಾಮಗಾರಿ ವಿಳಂಬವಾಗಿ ಸಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಈ ಬಗ್ಗೆ ಚರ್ಚಿಸಲು ಮುಂದಿನ ಸಭೆಗೆ ಸೆಂಟ್ರಲ್ ಪ್ರಾಜೆಕ್ಟ್ ವಿಭಾಗದ ಇಂಜಿನಿಯರ್ ರವರನ್ನು ಸಭೆಗೆ ಆಹ್ವಾನಿಸಲು ಪತ್ರ ಬರೆಯಲು ಸೂಚಿಸಿದರು.

6) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,</u> ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಕೋವಿಡ್-19 ಸ್ಥಿತಿಗತಿಯ ಬಗ್ಗೆ ಪ್ರಸ್ತಾಪಿಸಿದಾಗ, ಹಿರಿಯ ಆರೋಗ್ಯ ನಿರೀಕ್ಷಕರು ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ 411 ಕೋವಿಡ್ ಪ್ರಕರಣಗಳಿದ್ದು, ಈ ಪೈಕಿ 234 ಜನ ಹೋಂ ಐಸೋಲೇಷನ್ ನಿಂದ ಬಿಡುಗಡೆಯಾಗಿರುತ್ತಾರೆ. 136 ಜನ ಆಸ್ಪತ್ರೆಯಿಂದ ಗುಣಮುಖರಾಗಿ ಬಿಡುಗಡೆಯಾಗಿರುತ್ತಾರೆ. 17 ಜನ ಮರಣ ಹೊಂದಿರುತ್ತಾರೆ. 24 ಜನ ಸಕ್ರಿಯ ಪ್ರಕರಣಗಳಿದ್ದು, 20 ಮನೆ ಐಸೋಲೇಷನ್‌ನಲ್ಲಿ ಇರುತ್ತಾರೆ. 04 ಜನ ಮಾತ್ರ ಕೋವಿಡ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವುದಾಗಿ ಸಭೆಗೆ ತಿಳಿಸಿದಾಗ, ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ಮತ್ತಷ್ಟು ಕೋವಿಡ್ ತಪಾಸಣೆಗಳನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ವಿಭಾಗದ ಅಧಿಕಾರಿಗಳಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

7) <u>ಹಿರಿಯ ಆರೋಗ್ಯ ನಿರೀಕ್ಷಕರು ಮಾತನಾಡಿ,</u> ವಾರ್ಡ್ ಪ್ರದೇಶದಲ್ಲಿ ಕೋವಿಡ್ ತಪಾಸಣಾ ಸಂಚಾರಿ ಕೇಂದ್ರಗಳನ್ನು ತೆರೆಯಲಾಗಿದ್ದು, ದಿನನಿತ್ಯ ಎಲ್ಲಾ 04 ತಪಾಸಣಾ ಕೇಂದ್ರಗಳಿಂದ 150 ರಿಂದ 200 ಪ್ರಕರಣಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿರುತ್ತದೆ. ಇದರ ಮೇಲುಸ್ತುವಾರಿಯನ್ನು ಮಾನ್ಯ ಕೋವಿಡ್ ಉಸ್ತುವಾರಿ ತಹಶೀಲ್ದಾರರಾದಂತಹ ಶ್ರೀ ಶಿವಕುಮಾರ್ ರವರು ಸಮರ್ಪಕವಾಗಿ ವಹಿಸುತ್ತಿರುತ್ತಾರೆ ಎಂದು ಸಭೆಗೆ ತಿಳಿಸಿದರು. ತದನಂತರ ಮಾನ್ಯ ಅಧ್ಯಕ್ಷರು ಮಾತನಾಡಿ, ಕೋವಿಡ್ ತಪಾಸಣೆಗಳನ್ನು ದಿನದಿಂದ ದಿನಕ್ಕೆ ಹೆಚ್ಚು ಹೆಚ್ಚಾಗಿ ತಪಾಸಣೆಗಳನ್ನು ಕೈಗೊಂಡು ನಮ್ಮ ವಾರ್ಡ್ ಪ್ರದೇಶದಲ್ಲಿ ಜೀರೋ ಕೋವಿಡ್ ಪ್ರಕರಣ ಘೋಷಿಸಲು ಕ್ರಮ ಕೈಗೊಳ್ಳಲು ಸೂಚಿಸಿದರು.

8) ಮಾನ್ಯ ಅಧ್ಯಕ್ಷರು ಮಾತನಾಡಿ, ಸಂಚಾರಿ ಕೋವಿಡ್ ಪರೀಕ್ಷಾ ಕೇಂದ್ರವನ್ನು ಈ ಕೆಳಕಂಡ ದಿನಾಂಕಗಳಂದು ಕೆಳಕಂಡ ಪ್ರದೇಶಗಳಲ್ಲಿ ಹಮ್ಮಿಕೊಳ್ಳಲು ಸಭೆಯಲ್ಲಿ ಸೂಚಿಸಿರುತ್ತಾರೆ.

1) ದಿನಾಂಕ : 12-10-2020 ಸೋಮವಾರ – ಜಲವಾಯು ವಿಹಾರ್
2) ದಿನಾಂಕ : 13-10-2020 ಮಂಗಳವಾರ – ಆಯಿಲ್ ಮಿಲ್ ರಸ್ತೆ
3) ದಿನಾಂಕ : 14-10-2020 ಬುಧವಾರ – ಕೀರ್ತಿ ಲೇಔಟ್
4) ದಿನಾಂಕ : 15-10-2020 ಗುರುವಾರ – ಚಿನ್ನಪ್ಪ ಬಡಾವಣೆ
5) ದಿನಾಂಕ : 16-10-2020 ಶುಕ್ರವಾರ – ಹೆಚ್.ಬಿ.ಆರ್ ಲೇಔಟ್, 1ನೇ ಬ್ಲಾಕ್
6) ದಿನಾಂಕ : 17-10-2020 ಶನಿವಾರ – ಕಾಚರಕನಹಳ್ಳಿ ವಿಲೇಜ್
7) ದಿನಾಂಕ : 18-10-2020 ರವಿವಾರ – ಸಂಡೆ ಬಜಾರ್

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar.A

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>ಪ್ರತಿಯನ್ನು</u>

04/11/2020

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ.
6) ಕಛೇರಿ ಕಡತಕ್ಕೆ.

4/11/2020